6

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ರವರ ನಿಯಮ 330ರ ಸೂಚನೆಗೆ ಉತ್ತರ:**

**ಪ್ರಶ್ನೆ:**ರಾಜ್ಯದಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಸೈಬರ್ ವಂಚನೆ ಪ್ರಕರಣಗಳನ್ನು ತಡೆಯಲು ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳುವ ಕುರಿತು.

**ಉತ್ತರ:** ರಾಜ್ಯದಲ್ಲಿ ಸೈಬರ್ ಅಪರಾಧಗಳ ಕುರಿತಂತೆ, 2023 ಮತ್ತು 2024 (ನವೆಂಬರ್ 30ರ) ವರೆಗೆ ಇನ್‌ಫರ್‌ಮೇಷನ್ ಟೆಕ್ನಾಲಜಿ ಕಾಯ್ದೆ-2000 (ಸೈಬರ್ ಅಪರಾಧಗಳು) ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ:-

| **ವರ್ಷ** | **ಐಟಿ ಕಾಯ್ದೆ ಅಡಿಯ ಎಫ್.ಐ.ಆರ್ ಸಂಖ್ಯೆ** |
|---|---|
| 2023 | 22194 |
| 2024 (ನವೆಂಬರ್ -30) | 20875 |

**ಸೈಬರ್ ಅಪರಾಧಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:**

- ದೇಶದಲ್ಲಿ ಮೊಟ್ಟಮೊದಲ ಬಾರಿಗೆ ರಾಜ್ಯದಲ್ಲಿ ಸೈಬರ್ ಅಪರಾಧಗಳನ್ನು ನಿಯಂತ್ರಿಸಲು ಡಿಜಿಪಿ (ಸೈಬರ್ & ನಾರ್ಕೋಟಿಕ್ಸ್) ಶ್ರೇಣಿಯ ಹುದ್ದೆಯನ್ನು ಸೃಜಿಸಲಾಗಿದೆ.
- ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ರಾಜ್ಯಾದ್ಯಂತ 43 ಸೈಬರ್ ಪೊಲೀಸ್ ಠಾಣೆಗಳು (ಸಿ.ಇ.ಎನ್ ಪೊಲೀಸ್ ಠಾಣೆ) ಕಾರ್ಯನಿರ್ವಹಿಸುತ್ತಿವೆ.
- ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.
- ಎಲ್ಲಾ ಸಿ.ಇ.ಎನ್ ಪೊಲೀಸ್ ಠಾಣೆಗಳಲ್ಲಿ ಲಭ್ಯವಿರುವ ಸುಸಜ್ಜಿತ ವೈಜ್ಞಾನಿಕ ಉಪಕರಣಗಳನ್ನು ಬಳಸಿ ಸೈಬರ್ ಅಪರಾಧಗಳನ್ನು ಬೇಧಿಸುವಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳು ನಿರಂತರ ಶ್ರಮವಹಿಸುತ್ತಿದ್ದಾರೆ.
- ಐಟಿ ಕಾಯ್ದೆ-2000 ಅಡಿಯಲ್ಲಿ ಇನ್‌ಸ್ಪೆಕ್ಟರ್ ಮತ್ತು ಮೇಲ್ಪಟ್ಟ ಅಧಿಕಾರಿಗಳು ಸೈಬರ್ ಅಪರಾಧಗಳನ್ನು ತನಿಖೆ ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಸೈಬರ್ ಅಪರಾಧಗಳನ್ನು ತನಿಖೆ ಮಾಡುವ ಅಧಿಕಾರವನ್ನು ಪಿ.ಎಸ್.ಐ. ರವರಿಗೂ ನೀಡುವ ಸಂಬಂಧ ಚರ್ಚಿಸಲಾಗುತ್ತಿದೆ.
- ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.
- ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ

ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಸಿಐಡಿ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.
- ಆರ್.ಬಿ.ಐ ಮತ್ತು ಅದರಡಿಯಲ್ಲಿ ಕರ್ತವ್ಯ ನಿರ್ವಹಿಸುವ ಇತರೆ ಬ್ಯಾಂಕ್ ಸಂಸ್ಥೆಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ವರದಿಯಾಗುತ್ತಿರುವ ವಿವಿಧ ರೀತಿಯ ಸೈಬರ್ ಅಪರಾಧ ಪ್ರಕರಣಗಳಲ್ಲಿ ವಂಚನೆಗೊಳಗಾದ ಗ್ರಾಹಕರ ಹಣ ವಶಪಡಿಸಿಕೊಳ್ಳಲು ಮತ್ತು ತಡೆಗಟ್ಟಲು ಸೂಕ್ತ ಕ್ರಮ ವಹಿಸುವ ಬಗ್ಗೆ ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಮುಂಜಾಗೃತ ಕ್ರಮ ತೆಗೆದುಕೊಳ್ಳುವ ಬಗ್ಗೆ ಸಭೆಗಳಲ್ಲಿ ವಿಚಾರ ವಿನಿಮಯ ಮಾಡಿಕೊಳ್ಳಲಾಗುತ್ತಿದೆ.
- ಹೊಸ ಸೈಬರ್ ಕೈಪಿಡಿಯನ್ನು ಜಾರಿಗೆ ತರಲಾಗಿದೆ(New Cyber Investigation Manual).
- ಕೇಂದ್ರ ಎಫ್.ಎಸ್.ಎಲ್. ನಲ್ಲಿ ಸೈಬರ್ ಫೋರೆನ್ಸಿಕ್ ಸೆಲ್‌ನಿಂದ ಪ್ರತಿ ವರ್ಷ ಸುಮಾರು 1500 ಸೈಬರ್ ಪ್ರಕರಣಗಳಿಗೆ ವೈಜ್ಞಾನಿಕ ವರದಿಗಳನ್ನು ನೀಡಲಾಗುತ್ತಿದೆ.
- ಸೈಬರ್ ವಂಚನೆಗೆ ಒಳಗಾದವರು ಅಪರಾಧಗಳನ್ನು ವರದಿ ಮಾಡಲು 1930 ಮತ್ತು 112 ಹಾಗೂ ಎಸ್.ಸಿ.ಆರ್.ಪಿ. ಪೋರ್ಟಲ್‌ನಲ್ಲಿ ವರದಿ ಮಾಡುವ ಕುರಿತು ನಿರಂತರವಾಗಿ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಮಾಧ್ಯಮಗಳಲ್ಲಿ ಮಾಹಿತಿ ನೀಡಲಾಗುತ್ತಿದೆ.
- ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗೆ ಸಂಬಂಧಿಸಿದಂತೆ ಸೈಬರ್ ಅಪರಾಧಗಳ ತನಿಖೆ ಕೈಪಿಡಿ(Cyber Investigation Manual)ಯನ್ನು ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.
- ರಾಜ್ಯದಲ್ಲಿ ಸುಸಜ್ಜಿತವಾದ ನ್ಯಾಯವಿಜ್ಞಾನ ಪ್ರಯೋಗಾಲಯವು ಕಾರ್ಯನಿರ್ವಹಿಸುತ್ತಿದ್ದು, ಸೈಬರ್ ಕ್ರೈಂ ಅಪರಾಧ ಪ್ರಕರಣಗಳಲ್ಲಿನ ತನಿಖೆಗೆ ಸಂಬಂಧಿಸಿದಂತೆ ತಾಂತ್ರಿಕ ನೆರವು ನೀಡಲಾಗುತ್ತಿದೆ.

ಹೆಚ್‌ಡಿ 69 ಪಿಸಿಕ್ಯೂ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು